ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಮತ್ತು ಖಾಲಿ ಇರುವ ಹುದ್ದೆಗಳನ್ನು ಸಂಯುಕ್ತ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ತುಂಬಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ.

ಸೂಳ್ಯ ವಿಧಾನ ಸಭಾ ವ್ಯಾಪ್ತಿಯಲ್ಲಿ ಪ್ರಾಥಮಿಕ ಶಾಲೆಗಳಲ್ಲಿ ಹುದ್ದೆಗಳ ಭರ್ತಿ

3501(4069) ಶ್ರೀ ಅಂಗಾರ ಎಸ್ (ಸೂಳ್ಯ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಕಿರಿಯ, ಹಿರಿಯ ಪ್ರಾಥಮಿಕ ಶಾಲೆಗಳಿವೆ; ಸದರಿ ಶಾಲೆಗಳಿಗೆ ಮಂಜೂರಾದ ಹುದ್ದೆ ಎಷ್ಟು; ಹಾಲಿ ಖಾಲಿಯಿರುವ ಹುದ್ದೆಗಳು ಎಷ್ಟು; ವಿವರ ನೀಡುವುದು:

ಆ) ಸದರಿ ಖಾಲಿಯಿರುವ ಅಧ್ಯಾಪಕರ ಹುದ್ದೆಯನ್ನು ಭರ್ತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ ಎಷ್ಟು ಸಮಯದಲ್ಲಿ ಭರ್ತಿ ಮಾಡಲಾಗುವುದು?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ಸೂಳ್ಯ ವಿಧಾನ ಸಭಾ ಕ್ಷೇತ್ರದಲ್ಲಿ

1. 66 ಕಿರಿಯ ಪ್ರಾಥಮಿಕ ಶಾಲೆ ಮಂಜೂರು ಆಗಿದೆ.
   74 ಕಿರಿಯ ಪ್ರಾಥಮಿಕ ಶಾಲೆ ಮಂಜೂರು ಆಗಿದೆ
2. ಕಿರಿಯ ಪ್ರಾಥಮಿಕ ಶಾಲೆಗೆ 74 ಹುದ್ದೆ ಮಂಜೂರು ಆಗಿದೆ.
   ಹಿರಿಯ ಪ್ರಾಥಮಿಕ ಶಾಲೆಗೆ 517 ಹುದ್ದೆ ಮಂಜೂರಾಗಿದೆ
3. ಕಿರಿಯ ಪ್ರಾಥಮಿಕ ಶಾಲೆಯಲ್ಲಿ 26 ಹುದ್ದೆಗಳು ಖಾಲಿ ಇರುತ್ತವೆ.
   ಹಿರಿಯ ಪ್ರಾಥಮಿಕ ಶಾಲೆಯಲ್ಲಿ 25 ಹುದ್ದೆಗಳು ಖಾಲಿ ಇವೆ. ಒಟ್ಟು 51 ಹುದ್ದೆಗಳು ಖಾಲಿ ಇರುತ್ತವೆ.

ಆ) ಸಾಧ್ಯವಾದಷ್ಟು ಜಾಗ್ರತೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಸೂಳ್ಯ ತಾಲ್ಲೂಕಿನ ಡಾ॥ ಶಿವರಾಮ ಕಾರಂತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಅನುದಾನ

3502(4070) ಶ್ರೀ ಅಂಗಾರ ಎಸ್. (ಸೂಳ್ಯ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿನ ಬೆಳ್ಳಾರೆಯ ಡಾ: ಶಿವರಾಮ ಕಾರಂತ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಯಾವಾಗ ಮಂಜೂರು ಮಾಡಲಾಯಿತು;

ಆ) ಸದರಿ ಕಾಲೇಜು ಕಟ್ಟಡದ ಅಂದಾಜು ವೆಚ್ಚ ಮತ್ತು ಎಷ್ಟು ಅನುದಾನವನ್ನು ಒದಗಿಸಲಾಗಿದೆ; ಕಳೆದ ಮೂರು ವರ್ಷಗಳಿಂದ ವರ್ಷವಾರು ಅನುದಾನವನ್ನು ನೀಡಿದ ವಿವರವನ್ನು ನೀಡುವುದು?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ) 1991ನೇ ಸಾಲಿನಲ್ಲಿ ಮಂಜೂರು ಮಾಡಲಾಯಿತು.

ಆ) ರೂ. 30.00 ಲಕ್ಷಗಳು

ರೂ. 6.00 ಲಕ್ಷಗಳನ್ನು ಒದಗಿಸಲಾಗಿದೆ.

2000–01 – 6.00 ಲಕ್ಷ

2001–02 – –

2002–03 – –

ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರತಕ್ಕ ಉಪನ್ಯಾಸಕರ ಹುದ್ದೆಗಳು

3503(3502) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳು ಎಷ್ಟು; (ಜಿಲ್ಲಾವಾರು ವಿವರ ನೀಡವುದು ಮತ್ತು ಶಿವಮೊಗ್ಗ ಜಿಲ್ಲೆಯಲ್ಲಿನ ಕಾಲೇಜುವಾರು ವಿವರ ನೀಡುವುದು);

ಆ) ಎಂದಿನಿಂದ ಈ ಹುದ್ದೆಗಳು ಖಾಲಿ ಇದೆ; ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಈ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗುವುದೇ ಈ ಅನುಮತಿ ನೀಡದಿದ್ದಲ್ಲಿ ಕಾರಣಗಳೇನು?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ)

ಕಾಲೇಜು ಶಿಕ್ಷಣ	ತಾಂತ್ರಿಕ ಶಿಕ್ಷಣ
ಜಿಲ್ಲಾವಾರು ವಿವರಗಳನ್ನು ಅನುಬಂಧ–1ರಲ್ಲೂ ಶಿವಮೊಗ್ಗ ಜಿಲ್ಲೆಯಲ್ಲಿನ ಕಾಲೇಜುವಾರು ವಿವರಗಳನ್ನು ಅನುಬಂಧ–2ರಲ್ಲೂ ನೀಡಲಾಗಿದೆ	ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 10 ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ 33 ಅನುದಾನಿತ ಪಾಲಿಟೆಕ್ನಿಕ್‌ಗಳು ಇರುತ್ತವೆ. ಸದರಿ ಸಂಸ್ಥೆಗಳಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆಯನ್ನು ಪ್ರತ್ಯೇಕವಾಗಿ ಅನುಬಂಧದಲ್ಲಿ ಸೂಚಿಸಲಾಗಿದೆ. (ಪ್ರಸ್ತುತ ಹೊಸದಾಗಿ ಅನುದಾನಕ್ಕೆ ಒಳಪಟ್ಟ 27 ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಅನುದಾನಕ್ಕೆ ಒಳಪಡಿಸಲು ಕ್ರಮದಲ್ಲಿದೆ. ಈ 27 ಪಾಲಿಟೆಕ್ನಿಕ್‌ಗಳನ್ನು ಹೊರತುಪಡಿಸಿ ಹಳೆಯ 06 ಪಾಲಿಟೆಕ್ನಿಕ್‌ಗಳ ವಿವರಗಳನ್ನು ಅನುಬಂಧದಲ್ಲಿ ಸೂಚಿಸಲಾಗಿದೆ